# ಪಶ್ಚಿಮ ವಲಯ ವ್ಯಾಪ್ತಿಯ, ಮಲ್ಲೇಶ್ವರಂ ಉಪವಿಭಾಗದ ಗಾಯತ್ರಿನಗರ ವಾರ್ಡ್-76ರಲ್ಲಿ ದಿನಾಂಕ: 06-04-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ

## ಸಭಾ ನಡವಳಿಗಳು.

**ವಾರ್ಡ್ ಸಂಖ್ಯೆ-76 ಗಾಯತ್ರಿನಗರ** **ಸಮಯ ಬೆಳಿಗ್ಗೆ 11:00 ಘಂಟೆಗೆ**

ದಿನಾಂಕ: 06-04-2021 ರಂದು ವಾರ್ಡ್ ಸಂಖ್ಯೆ: 76ರ ಮಾರ್ಚ್ ಮಾಹೆಯ ವಾರ್ಡ್ ಸಮಿತಿ ಸಭೆಯು ನಡೆಯಿತು. ಸದರಿ ಸಭೆಯಲ್ಲಿ ವಾರ್ಡ್ ಸಮಿತಿ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು. ವಾರ್ಡ್ ಸಂಖ್ಯೆ: 76ರ ಸಹಾಯಕ ಅಭಿಯಂತರರು ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಎಲ್ಲರಿಗೂ ಸ್ವಾಗತವನ್ನು ಕೋರಿದರು ಹಾಗೂ ಸದಸ್ಯರುಗಳೆಲ್ಲರ ಕಿರು ವಿವರ ತಿಳಿಸಿ, ಮಾಸ್ಕ್ ಧರಿಸಿ ಸಾಮಾಜಿಕ ಅಂತರ ಕಾಯ್ದುಕೊಂಡು ಸಭೆ ನಡೆಸಲು ಕೋರಿದರು.

**ಸಭೆಗೆ ಹಾಜರಿದ್ದವರು:**

| | |
|---|---|
| 1 | ಶ್ರೀ ಚಂದ್ರಶೇಖರ್. ಹೆಚ್.ಆರ್, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್-76 ಗಾಯತ್ರಿನಗರ |
| 2 | ಶ್ರೀ ಚಿಕ್ಕಗೂಳಿಗೌಡ.ಜೆ.ಜಿ, ಸಹಾಯಕ ಅಭಿಯಂತರರು, ವಾರ್ಡ್-76 ಗಾಯತ್ರಿನಗರ ಹಾಗೂ ಕಾರ್ಯದರ್ಶಿ |
| 3 | ಶ್ರೀ ಕನಕರಾಜು, ಕಂದಾಯ ಪರಿವೀಕ್ಷಕರು |
| 4 | ಶ್ರೀಮತಿ ಶಾರದಾ ಬಾಯಿ, |
| | ಶ್ರೀ ಬಿ.ಜಿ ಕೃಷ್ಣಮೂರ್ತಿ, ಪಿ.ಎಸ್.ಐ |
| 5 | ಶ್ರೀ ಕೆ ಗೋವಿಂದರಾಜು, ಸ್ಯಾನಿಟರಿ ದಫೇದರ್, ಬಿಬಿಎಂಪಿ |
| 6 | ಡಾ॥ ಅಂಜನಾ, ಆರೋಗ್ಯ ಅಧಿಕಾರಿ |
| 7 | ಶ್ರೀ ಆರ್.ಸಂತೋಷ್, ಕೆಲಸ ಪರಿವೀಕ್ಷಕರು |
| 8 | ಶ್ರೀ ಪಿ.ವೆಂಕಟೇಶ್, ಎಲೆಕ್ಟ್ರೀಕಲ್ ಗುತ್ತಿಗೆದಾರರು |
| 9 | ಶ್ರೀ ಮಂಜುನಾಥ್, ವಾರ್ಡ್ ವೆಲ್‌ಫೇರ್ ಕಮಿಟಿ ಸದಸ್ಯರು |
| 10 | ಶ್ರೀಮತಿ ಕೃಪಾ ಪ್ರಕಾಶ್, ವಾರ್ಡ್ ವೆಲ್‌ಫೇರ್ ಕಮಿಟಿ ಸದಸ್ಯರು |
| 11 | ಶ್ರೀ ಸಂತೋಷ್, ವಾರ್ಡ್ ವೆಲ್‌ಫೇರ್ ಕಮಿಟಿ ಸದಸ್ಯರು |
| 12 | ಶ್ರೀ ಪ್ರದೀಪ್, ಮೇಲ್ವಿಚಾರಕರು |
| 13 | ಶ್ರೀ ರಂಗನಾಥ್, ಬೆಸ್ಕಾಂ, ಜೆ.ಇ |
| 14 | ಶ್ರೀ ಸಿದ್ದರಾಜು, ಬಿ.ಡಬ್ಲ್ಯೂಎಸ್ಎಸ್‌ಬಿ |
| 15 | ಶ್ರೀ ಕೊಂಡಯ್ಯ, ಆರೋಗ್ಯ ಪರಿವೀಕ್ಷಕರು |
| 16 | ಶ್ರೀ ಹರೀಶ್, ಮಾರ್ಷಲ್ |
| 17 | ಶ್ರೀ ಈಶ್ವರ್ ಗೌಡ, ವಾರ್ಡ್ ಅಧ್ಯಕ್ಷ |

ಸದರಿ ಸಭೆಯಲ್ಲಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

- ಶ್ರೀ ಚಂದ್ರಶೇಖರ್.ಹೆಚ್.ಆರ್ ನೋಡಲ್ ಅಧಿಕಾರಿಗಳು ವಾರ್ಡ್-76 ಇವರು ಸಭೆಯನ್ನು ಮುಂದುವರೆಸಲು ಸೂಚಿಸಿದರು.

**ಆರೋಗ್ಯ ಇಲಾಖೆ:**

- ಸಭೆಯಲ್ಲಿ ಹಾಜರಿದ್ದ ಆರೋಗ್ಯ ಅಧಿಕಾರಿಗಳಿಗೆ ವ್ಯಾಕ್ಸಿನೇಷನ್‌ನ್ನು ಪ್ರತಿದಿನ ನೀಡಲಾಗುತ್ತಿದೆ ಸಭೆಯಲ್ಲಿ ತಿಳಿಸಿದರು. ಹಾಗೂ ಪ್ರತಿದಿನ ಕೋವಿಡ್-19 ಪರೀಕ್ಷೆಗಳನ್ನು ನಡೆಸಲಾಗುತ್ತಿದೆ ಎಂದು ತಿಳಿಸಿದರು. ಪ್ರೈಮರಿ ಮತ್ತು ಸೆಕೆಂಡರಿ ಸಂಪರ್ಕ ಇರುವರನ್ನು ಪರೀಕ್ಷೆಗೆ ಒಳಪಡಿಸುವಂತೆ ಸಭೆಯಲ್ಲಿ ಸೂಚಿಸಲಾಯಿತು. ಪ್ರತಿದಿನ 10 ರಿಂದ 15 ಕೋವಿಡ್ ಪ್ರಕರಣಗಳು ದಾಖಲಾಗುತ್ತಿವೆ ಎಂದು ತಿಳಿಸಿದರು.

**ಆರೋಗ್ಯ ಇಲಾಖೆ (ಘನತ್ಯಾಜ್ಯ):**

- ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ 2ನೇ ಕ್ರಾಸ್ ನಾಗಪ್ಪ ಬ್ಲಾಕ್ ಕರ್ನ್‌ವೆನ್ಸಿಯಲ್ಲಿ ಸೊಳ್ಳೆಗಳು ಜಾಸ್ತಿಯಾಗಿದ್ದು, ಔಷಧಿ ಸಿಂಪಡಣೆ ಮಾಡುವಂತೆ ಸೂಚಿಸಲಾಯಿತು. ಹಾಗೂ ರೈಲ್ವೆ ಪ್ಯಾರಲೆಲ್ ರಸ್ತೆಯಲ್ಲಿ ಕಸವನ್ನು ತಂದು ಹಾಕುತ್ತಿದ್ದು, ಅಂತವರಿಗೆ ದಂಡವನ್ನು ವಿಧಿಸುವಂತೆ ವಾರ್ಡ್‌ನ ಮಾರ್ಷಲ್‌ಗಳಿಗೆ ಸಭೆಯಲ್ಲಿ ಸೂಚಿಸಲಾಯಿತು.

**ಕಂದಾಯ ಇಲಾಖೆ**

- ಕಂದಾಯ ಇಲಾಖೆ ಅಧಿಕಾರಿಗಳಿಗೆ ಕಂದಾಯ ಪಾವತಿಸದವರಿಗೆ ನೋಟಿಸ್ ಜಾರಿ ಮಾಡಿ ಕಂದಾಯ ವಸೂಲಿ ಮಾಡುವಂತೆ ಸಭೆಯಲ್ಲಿ ಸೂಚಿಸಲಾಯಿತು.

**ಬೆಸ್ಕಾಂ:**

- ಬೆಸ್ಕಾಂ ಅಧಿಕಾರಿಗಳಿಗೆ ರಸ್ತೆಗಳನ್ನು ಅಗೆಯುವಾಗ ವಾರ್ಡ್‌ನ ಅಭಿಯಂತರರ ಅನುಮತಿಯನ್ನು ಪಡೆದು ರಿಟೋರೇಷನ್ ಮಾಡುವಂತೆ ಸಭೆಯಲ್ಲಿ ಸೂಚಿಸಲಾಯಿತು.

**ಮಾಸ್ಕ್:**

- ವಾರ್ಡ್‌ನ ಮಾರ್ಷಲ್‌ಗಳಿಗೆ ರೈಲ್ವೆ ಪ್ಯಾರಲೆಲ್ ರಸ್ತೆಯಲ್ಲಿ ಕೋಳಿ ಘನತ್ಯಾಜ್ಯವನ್ನು ತಂದು ಹಾಕುತ್ತಿದ್ದು, ಅಂತವರಿಗೆ ದಂಡ ವಿಧಿಸುವಂತೆ ಸಭೆಯಲ್ಲಿ ಸೂಚಿಸಲಾಯಿತು.

ಬಿಡ್ಲ್ಯೂಎಸ್ಎಸ್‌ಬಿ ಇಲಾಖೆ

- ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ರೋಡ್ ಕಟ್ಟಿಂಗ್ ಮಾಡುವಾಗ ರಿಟೋರೇಷನ್‌ಗೆ ಬೇಕಾಗುವ ಸಾಮಾಗ್ರಿಗಳೊಂದಿಗೆ ರೋಡ್ ಕಟ್ಟಿಂಗ್ ಮಾಡುವಂತೆ ಸಭೆಯಲ್ಲಿ ಸೂಚಿಸಲಾಯಿತು.

ಮಾನ್ಯ ಅಧ್ಯಕ್ಷರ ಅಪ್ಪಣೆ ಮೇರೆಗೆ ಕಾರ್ಯದರ್ಶಿಯವರು ವಂದಾನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ,
ಸಹಾಯಕ ಅಭಿಯಂತರರು, ವಾರ್ಡ್–76
ಗಾಯತ್ರಿನಗರ, ಮಲ್ಲೇಶ್ವರಂ ಉಪ ವಿಭಾಗ, ಬಿಬಿಎಂಪಿ

ಅಧ್ಯಕ್ಷರು
ನೋಡಲ್ ಅಧಿಕಾರಿಗಳು, ವಾರ್ಡ್–76
ಮಲ್ಲೇಶ್ವರಂ ಉಪ ವಿಭಾಗ, ಬಿಬಿಎಂಪಿ